ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 998(964)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ನಿರಾಣಿ ಹಣಮಂತ ರುದ್ರಪ್ಪ(ಪದವೀಧರರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು

ವಿಷಯ : ಬೆಳಗಾವಿ ವಿಭಾಗದ ವಿಶ್ವವಿದ್ಯಾಲಯಗಳಲ್ಲಿ ಖಾಲಿಯಿರುವ ಬೋಧಕ / ಬೋಧಕೇತರ ಹುದ್ದೆಗಳ ನೇಮಕಾತಿ ಕುರಿತು

(ಅ) ಉನ್ನತ ಶಿಕ್ಷಣ ಇಲಾಖೆಯ ವತಿಯಿಂದ ಬೆಳಗಾವಿ ವಿಭಾಗದಲ್ಲಿ ಒಟ್ಟು ಎಷ್ಟು ವಿಶ್ವವಿದ್ಯಾಲಯಗಳು ಕಾರ್ಯನಿರ್ವಹಿಸುತ್ತಿವೆ; ಸದರಿ ವಿಶ್ವವಿದ್ಯಾಲಯಗಳಲ್ಲಿ ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು ವಿವರ ನೀಡುವುದು)

(ಆ) ಅವುಗಳಲ್ಲಿ ಖಾಯಂ ಗುತ್ತಿಗೆ ಆಧಾರದ ಮೇಲೆ ಮತ್ತು ದಿನಗೂಲಿ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು;

(ಇ) ಪ್ರಸ್ತುತ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು ವಿವರ ನೀಡುವುದು)

(ಈ) ಖಾಲಿಯಿರುವ ಹುದ್ದೆಗಳನ್ನು ನೇಮಕ ಮಾಡಲು ಸರ್ಕಾರ ಕ್ರಮ ಕೈಗೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ಸದರಿ ನೇಮಕಾತಿ ಪ್ರಕ್ರಿಯೆಗಳು ಪ್ರಸ್ತುತ ಯಾವ ಹಂತದಲ್ಲಿವೆ ಮತ್ತು ಯಾವ ಕಾಲಮಿತಿಯಲ್ಲಿ ನೇಮಕಾತಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲಾಗುವುದು;

(ಉ) ಇಲ್ಲವಾದಲ್ಲಿ, ನೇಮಕಾತಿ ಮಾಡಿಕೊಳ್ಳದಿರಲು ಕಾರಣಗಳೇನು?